ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 24-6-2017

# ಪತ್ರಿಕಾ ಆಮಂತ್ರಣ

## 1. ವಿಶ್ವ ಮಾದಕ ವಸ್ತು ವಿರೋಧಿ ಸಪ್ತಾಹ ಸಮಾರಂಭ

**ಜಾಗೃತಿ ಜಾಥ ಉದ್ಘಾಟನೆ:**

**ಚೇತನ್, ಖ್ಯಾತ ಚಲನಚಿತ್ರ ನಟರು.**

**ದಿನಾಂಕ: 26–06–2017, ಸೋಮವಾರ, ಸಮಯ : ಬೆಳಿಗ್ಗೆ 9.00 ಗಂಟೆಗೆ.**
**ಸ್ಥಳ : ಮೌರ್ಯ ಹೋಟೆಲ್ ವೃತ್ತದ ಗಾಂಧಿ ಪ್ರತಿಮೆಯಿಂದ ಕುಮಾರಪಾರ್ಕ್ ಗಾಂಧಿ ಭವನದವರೆಗೆ.**

**ಕಾರ್ಯಕ್ರಮ ಉದ್ಘಾಟನೆ:**

**ದಿನೇಶ್ ಗುಂಡುರಾವ್, ಮಾಜಿ ಸಚಿವರು ಹಾಗೂ ಗಾಂಧಿ ನಗರ ವಿಧಾನಸಭಾ ಸದಸ್ಯರು.**

**ಅಧ್ಯಕ್ಷತೆ:**

**ಹೆಚ್.ಸಿ. ರುದ್ರಪ್ಪ, ಅಧ್ಯಕ್ಷರು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ.**

**ದಿನಾಂಕ: 26–06–2017, ಸೋಮವಾರ, ಸಮಯ : ಬೆಳಿಗ್ಗೆ 10:30 ಗಂಟೆಗೆ.**
**ಸ್ಥಳ : ಗಾಂಧಿ ಭವನ, ಬೆಂಗಳೂರು.**

## 2. ಜಿ.ಎಸ್.ಟಿ. ಮತ್ತು ಚಲನಚಿತ್ರೋದ್ಯಮ: ಒಂದು ವಿಶ್ಲೇಷಣೆ

**ಅಧ್ಯಕ್ಷತೆ:**

ಎಸ್.ವಿ. ರಾಜೇಂದ್ರಸಿಂಗ್ ಬಾಬು, ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ,

**ವಿಷಯ ಪ್ರವೇಶ ನುಡಿ:**

ಬಿ. ಟಿ. ಮನೋಹರ್, ಅಧ್ಯಕ್ಷರು, ರಾಜ್ಯ ತೆರಿಗೆ ಸಮಿತಿ ಹಾಗೂ ಟೀಮ್, ಜಿ.ಎಸ್.ಟಿ. ಎಫ್.ಕೆ.ಸಿ.ಸಿ.ಐ.

ದಿನಾಂಕ: 27–06–2017, ಮಂಗಳವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ
ಸ್ಥಳ: ಮಹಾದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರಪಾರ್ಕ್ ರಸ್ತೆ, ಬೆಂಗಳೂರು

3. **ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೇಂಪೇಗೌಡ ಜಯಂತಿ:**

**ಉದ್ಘಾಟನೆ:**

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಅಧ್ಯಕ್ಷತೆ:**

ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಪ್ರಾಧಿಕಾರ, ನಗರಪಾಲಿಕೆ ಹಾಗೂ ಹಜ್ ಸಚಿವರು.

ದಿನಾಂಕ: 27–06–2017, ಮಂಗಳವಾರ, ಸಮಯ : ಬೆಳಿಗ್ಗೆ 11.30 ಗಂಟೆಗೆ.

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ಜೂನ್ 27 ರಂದು
# ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಜಯಂತಿ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜೂನ್ 27 ರಂದು ಬೆಳಿಗ್ಗೆ 11.30 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಅವರ ಜಯಂತಿಯನ್ನು ಆಚರಿಸಲಾಗುತ್ತಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದಾರೆ.

ಮಾಜಿ ಪ್ರಧಾನ ಮಂತ್ರಿ ಹಾಗೂ ಹಾಸನ ಲೋಕಸಭಾ ಕ್ಷೇತ್ರದ ಸಂಸದ ಹೆಚ್.ಡಿ. ದೇವೇಗೌಡ, ಕೇಂದ್ರದ ರಾಸಾಯನಿಕ ಹಾಗೂ ರಸಗೊಬ್ಬರ ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವ ಡಿ.ವಿ. ಸದಾನಂದಗೌಡ, ವಿಧಾನ ಪರಿಷತ್ತಿನ ಸಭಾಪತಿ ಡಿ.ಹೆಚ್. ಶಂಕರಮೂರ್ತಿ, ವಿಧಾನಸಭಾಧ್ಯಕ್ಷ ಕೆ.ಬಿ. ಕೋಳಿವಾಡ, ವಿಧಾನ ಪರಿಷತ್ ಉಪಸಭಾಪತಿ ಮರಿತಿಬ್ಬೇಗೌಡ ಹಾಗೂ ವಿಧಾನಸಭೆ ಉಪಸಭಾಧ್ಯಕ್ಷ ಶಿವಶಂಕರ್ ರೆಡ್ಡಿ ಅವರು ಉಪಸ್ಥಿತರಿರುವರು.

ಸಚಿವ ಸಂಪುಟದ ಸದಸ್ಯರು, ವಿರೋಧ ಪಕ್ಷದ ನಾಯಕರು ಲೋಕಸಭಾ ಹಾಗೂ ರಾಜ್ಯಸಭಾ ಸದಸ್ಯರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಮಹಾಪೌರರು ಸೇರಿದಂತೆ ಅನೇಕ ಗಣ್ಯರು ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ಅಂದು ಬೆಳಿಗ್ಗೆ 9.30 ಗಂಟೆಗೆ ಸ್ವಾತಂತ್ರ್ಯ ಉದ್ಯಾನವನದಿಂದ ವಿಧಾನಸೌಧಕ್ಕೆ ನಾಡಪ್ರಭು ಕೇಂಪೇಗೌಡರ ಸ್ತಬ್ಧಚಿತ್ರದೊಂದಿಗೆ ಜಾನಪದ ಕಲಾತಂಡಗಳ ಮೆರವಣಿಗೆಯನ್ನು ಹಾಗೂ ಬೆಳಿಗ್ಗೆ 10.30 ಗಂಟೆ ಸುಗಮ ಸಂಗೀತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ತುಮಕೂರು ಜಿಲ್ಲೆಯ ಹರೀಶ್ ಮತ್ತು ತಂಡದವರಿಂದ ಅರೆವಾದ್ಯ, ಬೆಂಗಳೂರು ಜಿಲ್ಲೆಯ ಕೀರ್ತನ್ ಮತ್ತು ತಂಡದವರಿಂದ ನಂದಿಧ್ವಜ, ಮೈಸೂರು ಜಿಲ್ಲೆಯ ಗಣೇಶ್ ಮತ್ತು ತಂಡದವರಿಂದ ನಗಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅರಸ ಕುಮಾರ್ ಮತ್ತು ತಂಡದವರಿಂದ ಕೀಲು ಕುದುರೆ, ತುಮಕೂರು ಜಿಲ್ಲೆಯ ಹೆಚ್.ಬಿ. ರಾಜೇಗೌಡ ಮತ್ತು ತಂಡದವರಿಂದ ಪೂಜಾ ಕುಣಿತ, ಚಾಮರಾಜನಗರ ಜಿಲ್ಲೆಯ ಮಾದಶೆಟ್ಟಿ ಮತ್ತು ತಂಡದವರಿಂದ ಕಂಸಾಳೆ, ಚಿತ್ರದುರ್ಗ ಜಲ್ಲೆಯ ಜಿ.ಎಸ್. ಲಿಂಗರಾಜ ಮತ್ತು ತಂಡದವರಿಂದ ಕೀಲು ಕುದುರೆ, ರಾಮನಗರ ಜಿಲ್ಲೆಯ ಶ್ರೀನಿವಾಸ ಮತ್ತು ತಂಡದವರಿಂದ ಸೋಮನ ಕುಣಿತ, ರಾಮನಗರ ಜಿಲ್ಲೆಯ ಶಿವಣ್ಣ ಅಂಕನಹಳ್ಳಿ ಮತ್ತು ತಂಡದವರಿಂದ ಡೊಳ್ಳು ಕುಣಿತ ಹಾಗೂ ಮೈಸೂರು ಜಿಲ್ಲೆಯ ರಾಜಪ್ಪ ಮತ್ತು ತಂಡದವರಿಂದ ವೀರಗಾಸೆ ಕುಣಿತ ಕಲಾತಂಡಗಳು ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಜೂನ್ 26 ರಂದು ವಿಶ್ವ ಮಾದಕ ವಸ್ತು ವಿರೋಧಿ ಸಪ್ತಾಹ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಕರ್ನಾಟಕ ಗಾಂಧೀ ಸ್ಮಾರಕ ನಿಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಇವರು ಸಂಯುಕ ಆಶ್ರಯದಲ್ಲಿ "ವಿಶ್ವ ಮಾದಕ ವಸ್ತು ವಿರೋಧಿ ಸಪ್ತಾಹ ಸಮಾರಂಭ" ವನ್ನು ಜೂನ್ 26 ರಂದು ಬೆಳಿಗ್ಗೆ 10.30 ಗಂಟೆಗೆ ಗಾಂಧಿ ಭವನದಲ್ಲಿ ಹಮ್ಮಿಕೊಂಡಿದೆ.

ಈ ಸಂಬಂಧ ನಗರದ ಮೌರ್ಯ ಹೋಟೆಲ್ ವೃತ್ತದ ಗಾಂಧಿ ಪ್ರತಿಮೆಯಿಂದ ಕುಮಾರಪಾರ್ಕ್‌ನ ಗಾಂಧಿ ಭವನದವರೆಗೆ ಬೆಳಿಗ್ಗೆ 9.00 ಗಂಟೆಗೆ ಜಾಗೃತಿ ಜಾಥಾದ ಉದ್ಘಾಟನೆ ನೆರವೇರಲಿದೆ.

ಖ್ಯಾತ ಚಲನಚಿತ್ರ ನಟ ಚೇತನ್ ಅವರು ಜಾಗೃತಿ ಜಾಥಾ ಉದ್ಘಾಟನೆ ನೆರವೇರಿಸುವರು.

ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವರು ಹಾಗೂ ಗಾಂಧೀನಗರ ವಿಧಾನಸಭಾ ಕ್ಷೇತ್ರ ಶಾಸಕರೂ ಆದ ದಿನೇಶ್ ಗುಂಡುರಾವ್ ಅವರು ನೆರವೇರಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಹೆಚ್.ಸಿ. ರುದ್ರಪ್ಪ ಅವರು ವಹಿಸಲಿದ್ದಾರೆ.

ನಗರಪಾಲಿಕೆ, ನಗರಾಬಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್, ಬೆಂಗಳೂರು ಕೇಂದ್ರದ ಸಂಸದ ಪಿ.ಸಿ. ಮೋಹನ್, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಅಧ್ಯಕ್ಷ ಡಾ. ವೂಡೇ ಪಿ. ಕೃಷ್ಣ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್. ಕಾಂತರಾಜು, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ಧರಾಜು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ ಖ್ಯಾತ ಮನೋವೈದ್ಯರಾ ಡಾ. ಪ್ರತಿಮಾ ಮೂರ್ತಿ ಹಾಗೂ ಎನ್.ಎಸ್.ಎಸ್. ಬೆಂಗಳೂರು ವಿಶ್ವವಿದ್ಯಾಲಯದ ಸಂಯೋಜನಾಧಿರಿಗಳಾದ ಡಾ. ಶ್ರೀನಿವಾಸ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಎಸ್‌ಎಂ:ಜೆಡಿ:ಜಿಪಿಆರ್.

## ಜೂನ್ 27 ರಂದು
## ಜಿ.ಎಸ್.ಟಿ. ಮತ್ತು ಚಲನಚಿತ್ರೋದ್ಯಮ ಒಂದು ವಿಶ್ಲೇಷಣೆ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಹಾಗೂ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್.ಕೆ.ಸಿ.ಸಿ.ಐ) ಇವರ ಸಂಯುಕ್ತಾಶ್ರಯದಲ್ಲಿ "ಜಿ.ಎಸ್.ಟಿ. ಮತ್ತು ಚಲನಚಿತ್ತೋದ್ಯಮ" ಒಂದು ವಿಶ್ಲೇಷಣೆ ಎಂಬ ಕಾರ್ಯಕ್ರಮವನ್ನು ಜೂನ್ 27 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕುಮಾರ ಪಾರ್ಕ್ ರಸ್ತೆಯಲ್ಲಿರುವ ಗಾಂಧಿ ಭವನದ ಮಹಾದೇವ ದೇಸಾಯಿ ಸಭಾಂಗಣದಲ್ಲಿ  ಹಮ್ಮಿಕೊಂಡಿದೆ.

ಈ ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು ಅವರು ವಹಿಸಲಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪ್ರಾಸ್ತಾವಿಕ ನುಡಿಯನ್ನು ನುಡಿಯಲಿದ್ದಾರೆ.

ರಾಜ್ಯ ತೆರಿಗೆ ಸಮಿತಿ ಹಾಗೂ ಟೀಮ್, ಜೆ.ಎಸ್.ಟಿ., ಎಫ್. ಕೆ.ಸಿ.ಸಿ.ಐ. ಅಧ್ಯಕ್ಷ ಬಿ.ಟಿ. ಮನೋಹರ್ ಅವರು ವಿಷಯ ಪ್ರವೇಶ ನುಡಿ ಮಾಡುವರು.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಅವರು ಚಿತ್ರೋದ್ಯಮದ ದೃಷ್ಠಿಯಲ್ಲಿ ಜಿ.ಎಸ್.ಟಿ. ಕುರಿತಂತೆ ಮಾತನಾಡುವರು.

ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯಕ್ತರಾದ ಕೆ.ಎಸ್. ಬಸವರಾಜ್, ಡಾ. ಬಿ.ವಿ. ಮುರಳಿಕೃಷ್ಣ, ಕೆ. ರಾಮನ್ ಹಾಗೂ ಚಾರ್ಟರ್ಡ್ ಅಕೌಂಟೆಂಟ್ ಹಾಗೂ ವಿಷಯ ತಜ್ಞ ವಿವೇಕ್ ಮಲ್ಯ ಅವರು ಈ ವಿಶ್ಲೇಷಣೆಯಲ್ಲಿ ಪಾಲ್ಗೊಳ್ಳುವರು.

ಕರ್ನಾಟಕ ಚಲನಚಿತ್ರ ನಿರ್ಮಾಪಕರ ಸಂಘ, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ ಹಾಗೂ ಕರ್ನಾಟಕ ಚಲನಚಿತ್ರ ಕಲಾವಿದರ ಸಂಘಗಳು ಸಹ ಈ ವಿಶ್ಲೇಷಣೆಯಲ್ಲಿ ಪಾಲ್ಗೊಳ್ಳಲಿವೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ರೈತರ ಆದಾಯ 5 ವರ್ಷಗಳಲ್ಲಿ ದ್ವಿಗುಣ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಭಾರತ ಸರ್ಕಾರದ ಆರ್ಥಿಕ ಸಚಿವರು ತಮ್ಮ 2016-17 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರೈತರ ಆದಾಯವನ್ನು ಮುಂದಿನ 5 ವರ್ಷಗಳಲ್ಲಿ ದ್ವಿಗುಣಗೊಳಿಸುವ ಪ್ರಸ್ತಾಪವನ್ನು ಮಾಡಿದ್ದರು. ರಾಷ್ಟ್ರದ ಪ್ರಧಾನ ಮಂತ್ರಿಗಳ ಈ ಪ್ರಸ್ತಾಪವನ್ನು ಹಲವೆಡೆ ಪುರುಚ್ಚರಿಸಿ ಅನುಮೋದಿಸಿರುತ್ತಾರೆ. ಕೇಂದ್ರ ಸರ್ಕಾರದ ಕೃಷಿ ರಾಜ್ಯ ಸಚಿವರು ರಾಜ್ಯಸಭೆಯಲ್ಲಿ ಅಧಿಕೃತವಾಗಿ ರೈತರ ಆದಾಯ ದ್ವಿಗುಣಗೊಳಿಸುವ ಯೋಜನೆಗಳಾದ ಕೃಷಿ ಪರಿಕರಗಳನ್ನು ಸಮರ್ಪಕವಾಗಿ ಬಳಸುವುದು, ಉತ್ಪಾದನಾ ಅನಿಶ್ಚಿತತೆಗಳನ್ನು ದೂರಮಾಡಿ ಎಕರೆವಾರು ಉತ್ಪಾದಕತೆಯನ್ನು ಅಧಿಕಗೊಳಿಸುವುದು ಹಾಗೂ ಉತ್ಪಾದನಾ ವೆಚ್ಚವನ್ನು ಇಳಿಸಿ ಲಾಭದಯಕ ಬೆಲೆ ಸಿಗುವಂತೆ ಮಾಡುವುದು ಎಂದು ಕೆ.ಎ.ಪಿ.ಸಿ. ಅಧ್ಯಕ್ಷ ಡಾ. ಟಿ.ಎನ್. ಪ್ರಕಾಶ್ ಕಮ್ಮರಡಿ ಅವರು ತಿಳಿಸಿದರು.

ಇಂದು ಬೆಂಗಳೂರು ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗೆ ಅಧ್ಯಯನ ಸಂಸ್ಥೆಯ ಹಾಗೂ ಕರ್ನಾಟಕ ಕೃಷಿ ಬೆಲೆ ಆಯೋಗದ ಜಂಟಿ ಆಶ್ರಯದಲ್ಲಿ , "ಕರ್ನಾಟಕದಲ್ಲಿ ರೈತರ ಆದಾಯ. ಮತ್ತು ಕಲ್ಯಾಣ" ವೃದ್ಧಿ ರಾಷ್ಟ್ರೀಯ ಕಾರ್ಯಾಗಾರದಲ್ಲಿ ಪ್ರಸ್ತಾವಿಕವಾಗಿ ಮಾತನಾಡುತ್ತಾ ಸಾವಯವ ಕೃಷಿಯನ್ನು ಪ್ರೋತ್ಸಾಹಿಸುವುದಕ್ಕಾಗಿ "ಪರಂಪರಾಗತ ಕೃಷಿ ವಿಕಾಸ ಯೋಜನೆ" ಯನ್ನು ಪ್ರೋತ್ಸಾಹಿಸುವು ಮತ್ತು ನೀರಿನ ಸಮರ್ಥ ಸದ್ಬಾಳಕೆಗಾಗಿ "ಕೃಷಿ ಸಿಂಚಾಯಿ ಯೋಜನೆ" ಯನ್ನು ಕಾರ್ಯಗತಗೊಳಿಸುವುದು. ಪ್ರಧಾನ ಮಂತ್ರಿ ಫಸಲ್ ಯೋಜನೆ" ಯನ್ನು ಬಲಗೊಳಿಸುವುದು ಎಂದರು.

ಕೃಷಿ ಮಾರುಕಟ್ಟೆ ಪದ್ಧತಿಯನ್ನು ಸ್ಪರ್ಧಾತ್ಮಕಗೊಳಿಸಲು ಕರ್ನಾಟಕದಲ್ಲಿ ಯಶಸ್ಸನ್ನು ಕಂಡಿರುವ ಕೃಷಿ ಉತ್ಪನ್ನಗಳ ಆನ್‌ಲೈನ್ ಮಾರುಕಟ್ಟೆಗೆ ವಿಶೇಷ ಗಮನಹರಿಸಲಾಗಿದೆ. ಜೊತೆಗೆ ಹಲವಾರು ವರ್ಷಗಳಿಂದ ಜಾರಿಯಲ್ಲಿರುವ 'ಕನಿಷ್ಟ ಬೆಂಬಲ ಬೆಲೆ" ಯೋಜನೆಯನ್ನು ದಕ್ಷತೆಯಿಂದ ಅನುಷ್ಠಾನಗೊಳಿಸಿದರೆ ರೈತರ "ಸಂಕಷ್ಟದ ಮಾರಾಟ" ವನ್ನು ತಪ್ಪಿಸಬಹುದು ಎಂದು ಭಾರತ ಸರ್ಕಾರವು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಕಾರ್ಯದರ್ಶಿ ಡಾ. ಅಶೋಕ್ ದಳವಾಯಿ ಅವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

## ನೇಮಕಾತಿ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಖಾಲಿ ಇರುವ ಅಧ್ಯಕ್ಷರ ಸ್ಥಾನಕ್ಕೆ ಆರ್. ಪಿ. ನಾಯ್ಕ ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ರಂಜಾನ್ ಹಬ್ಬದ ಶುಭಾಷಯ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ನವದೆಹಲಿಯಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿಯಾಗಿರುವ ಅಪ್ಪಾಜಿ ಸಿ.ಎಸ್. ನಾಡಗೌಡ ಅವರು ಪವಿತ್ರ ರಂಜಾನ ಹಬ್ಬದ ಸಂದರ್ಭದಲ್ಲಿ ನಾಡಿನ ಸಮಸ್ತ ಮುಸ್ಲಿಂ ಬಾಂಧವರಿಗೆ ತುಂಬು ಹೃದಯದ ಹಾರ್ದಿಕ ಶುಭಾಷಯಗಳನ್ನು ಕೋರಿದ್ದಾರೆ.

ನಾಡಿನ ಸಮಸ್ತ ಮುಸ್ಲಿಂ ಮಿತ್ರರಿಗೆ ಈದ್ ಮುಬಾರಕ್ ತಿಳಿಸುತ್ತಾ, ಪ್ರವಿತ ರಂಜಾನ್ ಹಬ್ಬದ ಸಮಯದಲ್ಲಿ ಎಲ್ಲರೂ ಶಾಂತಿ, ಸೌಹಾರ್ದತೆ ಸಹಬಾಳ್ವೆಯನ್ನು ಕಾಪಾಡುವುದಾಗಿ ಆಶಿಸಿ ತಮ್ಮೆಲ್ಲರಿಗೂ ಶುಭವಾಗಲೆಂದು ಹಾರೈಸುತ್ತೇನೆ ಎಂದು ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸಾಲ ಮನ್ನಾ – ಸರ್ಕಾರಿ ಆದೇಶ ಪ್ರಕಟ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ರಾಜ್ಯದ ರೈತರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್. ಡಿಸಿಸಿ ಬ್ಯಾಂಕುಗಳು ಮತ್ತು ಪಿಕಾರ್ಡ್ ಬ್ಯಾಂಕುಗಳಿಂದ ಪಡೆದ ಅಲ್ಪಾವಧಿ ಬೆಳೆ ಸಾಲದ ಪೈಕಿ ದಿನಾಂಕ 20-6-2017 ಕ್ಕೆ ಹೊಂದಿರುವ ಹೊರಬಾಕಿ ಮೊತ್ತದಲ್ಲಿ ಗರಿಷ್ಠ ರೂ. 50,000/- (ಐವತ್ತು ಸಾವಿರ ರೂಪಾಯಿಗಳು ಮಾತ್ರ) ಗಳ ವರೆಗಿನ ಸಾಲವನ್ನು ಮನ್ನಾ ಮಾಡಲು ತೀರ್ಮಾನಿಸಿ ಸರ್ಕಾರಿ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಈ ನಿರ್ಧಾರದಿಂದ ಸಹಕಾರಿ ಬ್ಯಾಂಕ್‌ಗಳಲ್ಲಿ ಜೂನ್ 20 ರವರೆಗೆ ಸಾಲ ಪಡೆದಿರುವ 22.27 ಲಕ್ಷ ಮಂದಿ ರೈತರಿಗೆ ಅನುಕೂಲವಾಗಲಿದ್ದು, ರಾಜ್ಯ ಸರ್ಕಾರ 8167 ಕೋಟಿ ರೂ. ಹಣವನ್ನು ಸಹಕಾರಿ ಬ್ಯಾಂಕ್‌ಗಳಿಗೆ ಭರಿಸಲಿದೆ.

ಈ ಸೌಲಭ್ಯವು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್, ಡಿಸಿಸಿ ಬ್ಯಾಂಕ್‌ಗಳು ಮತ್ತು ಪಿ ಕಾರ್ಡ್ ಬ್ಯಾಂಕುಗಳ ಮೂಲಕ ವಿತರಿಸಿರುವ ಕೃಷಿಯೇತರ ಸಾಲಗಳು, ಮಾಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳು, ಪಶುಭಾಗ್ಯ ಯೋಜನೆಯಡಿ ನೀಡಿದ ಸಾಲಗಳು ಮತ್ತು ಇತರೆ ಸಾಲಗಳಿಗೆ ಅನ್ವಯವಾಗುವುದಿಲ್ಲ.

ಈ ಯೋಜನೆಯಡಿ ಮನ್ನಾ ಮಾಡಿದ ಸಾಲವು, ರೈತರು ಸಾಲ ಪಡೆದು ಸಾಲ ಮರುಪಾವತಿ ಮಾಡುವ ಗಡುವು ದಿನಾಂಕಕ್ಕೆ ಜಾರಿಗೆ ಬರುತ್ತದೆ. ಅಂದರೆ ಈ ಯೋಜನೆಯಡಿಯಲ್ಲಿ ಸಾಲ ಮನ್ನಾ ಸೌಲಭ್ಯ ಪಡೆದ ರೈತರು ಸಾಲ ಮರುಪಾವತಿ ನಿಗಧಿಪಡಿಸಿದ ಗಡುವು ದಿನಾಂಕ ಮುಗಿದ ನಂತರವೇ ಪುನ: ಸಾಲ ಪಡೆಯಲು ಅರ್ಹರಾಗುತ್ತಾರೆ.

ಯಾವುದೇ ಸಮನ್ವಯ ಒಂದಕ್ಕಿಂತ ಹೆಚ್ಚಿನ ಸಹಕಾರ ಸಂಘ/ಸಹಕಾರ ಬ್ಯಾಂಕಿನಲ್ಲಿ ಸಾಲ ಪಡೆದಿದ್ದರೆ ಒಂದು ಸಂಸ್ಥೆಯಿಂದ ಮಾತ್ರ ರೂ. 50,000/- ವರೆವಿಗೆ ಸಾಲ ಮನ್ನಾ ಸೌಲಭ್ಯ ಪಡೆಯತಕ್ಕದ್ದು.

ಈ ಯೋಜನೆ ಅನುಷ್ಠಾನದಿಂದ ತಗಲುವ ವೆಚ್ಚವನ್ನು ಭರಿಸುವ ವಿಧಿವಿಧಾನಗಳ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಪ್ರತ್ಯೇಕ ಆದೇಶವನ್ನು ಹೊರಡಿಸಲಾಗುವುದು.

ಎಸ್‌ಎಂ:ಜೆಡಿ:ಜಿಪಿಆರ್.

## ಜೂನ್ 27 ರಂದು ಕೆಂಪೇಗೌಡ ಜಯಂತಿ

**ಬೆಂಗಳೂರು, ಜೂನ್ 24 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಅವರ ಜಯಂತಿಯನ್ನು ಜೂನ್ 27 ರಂದು ಆಚರಿಸಲಾಗುತ್ತದೆ ಎಂದು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಕೆಂಪೇಗೌಡರ ಆಡಳಿತದ ಅವಧಿಯಲ್ಲಿ ಬೆಂಗಳೂರು ವಿಶ್ವದ ಗಮನ ಸೆಳೆದಿತ್ತು, ಆರಂಭದಿಂದಲೂ ವಾಣಿಜ್ಯ ನಗರಿಯೆಂದೇ ಬೆಂಗಳೂರು ಬೆಳಕಿಗೆ ಬಂದಿತ್ತು. ಆಧುನಿಕ ನಗರ ಯಾವ ರೀತಿ ಇರಬೇಕೆಂಬುದನ್ನು ನಾಡಪ್ರಭು ಕೆಂಪೇಗೌಡ ಅವರು 1537 ರಲ್ಲಿಯೇ ಯೋಚಿಸಿದ್ದರು.

ಬೆಂಗಳೂರು ನಗರದ ನಾಲ್ಕು ದಿಕ್ಕುಗಳಲ್ಲಿ ಗಡಿಸ್ಥಾಪಿಸಿದ್ದು ಇಂದಿಗೂ ಸಾಕ್ಷಿಯಾಗಿವೆ ಎಂದರು. ಇನ್ನು ಮುಂದೆ ಪ್ರತಿ ವರ್ಷ ಜೂನ್ 27 ರಂದು ನಾಡಪ್ರಭು ಕೆಂಪೇಗೌಡ ಅವರ ಜನ್ಮ ದಿನವನ್ನು ರಾಜ್ಯ ಸರ್ಕಾರದ ಕಾರ್ಯಕ್ರಮವನ್ನಾಗಿ ಸರ್ಕಾರ ಆಚರಿಸುತ್ತದೆ ಎಂದ ಸಚಿವರು ಈ ವರ್ಷ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ಮುಂದಿನ ವರ್ಷದಿಂದ ಏಕಕಾಲಕ್ಕೆ ರಾಜ್ಯದೆಲ್ಲೆಡೆ ನಾಡಪ್ರಭು ಕೆಂಪೇಗೌಡರ ಜನ್ಮದಿನಾಚರಣೆಯನ್ನು ಆಚರಿಸಲಾಗುವುದು ಎಂದು ತಿಳಿಸಿದರು. ಕೆಂಪೇಗೌಡರ ಕಾಲದಲ್ಲೇ ಅಕ್ಕಿಪೇಟೆ, ತಿಗಳರ ಪೇಟೆ, ನಗರತ್‌ಪೇಟೆ ಎಂಬ ವಿವಿಧ ವ್ಯಾಪಾರ ವಲಯಗಳಿಗೆ ಪ್ರತ್ಯೇಕವಾದ ಪೇಟೆಗಳನ್ನು ನಿರ್ಮಾಣ ಮಾಡಿ ವಾಣಿಜ್ಯ ನಗರ ಎಂಬುದನ್ನು ಆಗಲೇ ಸಾಬೀತುಪಡಿಸಿದರು.

480 ವರ್ಷಗಳ ಹಿಂದೆಯೇ ಕೆಂಪೇಗೌಡರು ಸಾಮಾಜಿಕ ನ್ಯಾಯವನ್ನು ಒದಗಿಸುವಲ್ಲಿ ಶ್ರಮಿಸಿದರು. ಅದೇ ಪರಂಪರೆಯನ್ನು ಮುಂದುವರೆಸಿಕೊಂಡು ಬಂದಿರುವ ನಮ್ಮ ಸರ್ಕಾರ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿದಿದೆ ಎಂದ ಸಚಿವರು ನಾಡಪ್ರಭು ಕೆಂಪೇಗೌಡ ಅವರು ಎಲ್ಲಾ ಜಾತಿ ಧರ್ಮಗಳ ರಕ್ಷಣೆಯೊಂದಿಗೆ ಎಲ್ಲರನ್ನೂ ಸಮಾನವಾಗಿ ಕಂಡವರು. ಅದೇ ರೀತಿ ನಮ್ಮ ಸರ್ಕಾರವೂ ಸಹ ಎಲ್ಲರನ್ನು ಒಂದೇ ರೀತಿ ಕಾಣುತ್ತದೆ. ಅಲ್ಲದೆ ರಕ್ಷಣೆ ಮತ್ತು ಭದ್ರತೆಯನ್ನು ಒದಗಿಸುತ್ತಿದ್ದು ಬೆಂಗಳೂರು ನಗರಕ್ಕೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ನಮ್ಮ ಸರ್ಕಾರ ಕಲ್ಪಿಸಿಕೊಡುತ್ತಿದೆ ಎಂದರು.

ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ ಸಧ್ಯಕ್ಕೆ ಮೇಯೋಹಾಲ್‌ನಲ್ಲಿ ತಾತ್ಕಾಲಿಕವಾಗಿ ಕಾರ್ಯ ಆರಂಭಿಸಿದ್ದು ಮುಂದಿನ ದಿನಗಳಲ್ಲಿ ಮಾಗಡಿ ರಸ್ತೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ 5 ಎಕರೆ ಜಾಗದಲ್ಲಿ ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮೀಸಲಿಡಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಬೆಂಗಳೂರು ವಿಶ್ವವಿದ್ಯಾಲಯ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ಕೆಂಪೇಗೌಡ ಅವರ ಚಿಂತನೆ ಕುರಿತ ಸಂಶೋಧನೆಗೆ ಅವಕಾಶ ಕಲ್ಪಿಸಿಕೊಟ್ಟಿದ್ದು ಸರ್ಕಾರ ಇದಕ್ಕಾಗಿ 50 ಕೋಟಿ ರೂ. ಹಣವನ್ನು ಮೀಸಲಿಟ್ಟಿದೆ ಎಂದು ಸಚಿವರು ತಿಳಿಸಿದರು.